- -

# ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ: ಕರ್ನಾಟಕ ರೈತ ಉತ್ಪಾದಕರ ಸಂಸ್ಥೆಗಳ ನೀತಿ–2018ರಲ್ಲಿ ನಮೂದಿಸಿರುವಂತೆ ಅಧಿಕಾರಯುಕ್ತ ಸಮಿತಿ ಹಾಗೂ ಜಿಲ್ಲಾ ಮಟ್ಟದ ರೈತ ಉತ್ಪಾದಕರ ಸಂಸ್ಥೆಗಳ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿ ರಚಿಸುವ ಕುರಿತು.

ಉಲ್ಲೇಖ:
1. ಸರ್ಕಾರಿ ಆದೇಶ ಸಂಖ್ಯೆ: ಕೃಇ 92 ಕೃಉಇ 2018, ಬೆಂಗಳೂರು ದಿನಾಂಕ: 17.01.2019.
2. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರ ಪ್ರಸ್ತಾವನೆ ಸಂಖ್ಯೆ: WDD/PC/PPPIAD/30/18-19, ದಿನಾಂಕ: 28.01.2019

ಪ್ರಸ್ತಾವನೆ:–

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕರ್ನಾಟಕ ರೈತ ಉತ್ಪಾದಕರ ಸಂಸ್ಥೆಗಳ ನೀತಿ–2018 (Karnataka Farmer Producer Organizations (FPOs) Policy 2018) ಅನ್ನು ಜಾರಿಗೆ ತರಲು ಸರ್ಕಾರವು ಮಂಜೂರಾತಿ ನೀಡಿರುತ್ತದೆ.

ಮೇಲೆ ಓದಲಾದ (2)ರ ಪ್ರಸ್ತಾವನೆಯಲ್ಲಿ, ಕರ್ನಾಟಕ ರೈತ ಉತ್ಪಾದಕರ ಸಂಸ್ಥೆಗಳ ನೀತಿ–2018 (Karnataka Farmer Producer Organizations (FPOs) Policy 2018) ಯನ್ನು ಅನುಷ್ಠಾನಗೊಳಿಸಲು ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದಲ್ಲಿ ಅಧಿಕಾರಯುಕ್ತ ಸಮಿತಿಯನ್ನು ಹಾಗೂ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರೈತ ಉತ್ಪಾದಕರ ಸಂಸ್ಥೆಗಳ ಸಮನ್ವಯ ಮತ್ತು ಮೇಲ್ವಿಚಾರಣಾ ಘಟಕವನ್ನು ರಚಿಸಿ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಕೃಇ 92 ಕೃಉಇ 2018, ಬೆಂಗಳೂರು, ದಿನಾಂಕ 26.02.2019.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ರೈತ ಉತ್ಪಾದಕರ ಸಂಸ್ಥೆಗಳ ನೀತಿ–2018 (Karnataka Farmer Producer Organizations (FPOs) Policy 2018) ಯನ್ನು ಅನುಷ್ಠಾನಗೊಳಿಸಲು ರಾಜ್ಯ ಮಟ್ಟದಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿನ ವಿವಿಧ ಪಾಲುದಾರರನ್ನು ಒಳಗೊಂಡ ರಾಜ್ಯಮಟ್ಟದ ಅಧಿಕಾರಯುಕ್ತ ಸಮಿತಿಯನ್ನು ಹಾಗೂ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ರೈತ ಉತ್ಪಾದಕರ ಸಂಸ್ಥೆಗಳ ಸಮನ್ವಯ ಮತ್ತು ಮೇಲ್ವಿಚಾರಣೆ ಸಮಿತಿಯನ್ನು ಈ ಕೆಳಕಂಡಂತೆ ರಚಿಸಿ ಸರ್ಕಾರವು ಆದೇಶಿಸಿದೆ.

Scanned by CamScanner

## I. ರಾಜ್ಯ ಮಟ್ಟದ ಅಧಿಕಾರಯುಕ್ತ ಸಮಿತಿ (State Level Empowered Committee):

| ಕ್ರ.ಸಂ. | ಪದನಾಮ | ಹುದ್ದೆ |
|---|---|---|
| 1 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು | ಅಧ್ಯಕ್ಷರು |
| 2 | ಮುಖ್ಯ ಪ್ರಧಾನ ವ್ಯವಸ್ಥಾಪಕರು, ನಬಾರ್ಡ್ | ಸದಸ್ಯರು |
| 3 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು (ಆಯವ್ಯಯ & ಸಂಪನ್ಮೂಲ), ಆರ್ಥಿಕ ಇಲಾಖೆ | ಸದಸ್ಯರು |
| 4 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ಯೋಜನಾ ಇಲಾಖೆ | ಸದಸ್ಯರು |
| 5 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ಕೃಷಿ ಇಲಾಖೆ | ಸದಸ್ಯರು |
| 6 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ | ಸದಸ್ಯರು |
| 7 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ಪಶು ಸಂಗೋಪಾನೆ ಮತ್ತು ಮೀನುಗಾರಿಕೆ ಇಲಾಖೆ | ಸದಸ್ಯರು |
| 8 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ | ಸದಸ್ಯರು |
| 9 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ಸಹಕಾರ ಇಲಾಖೆ | ಸದಸ್ಯರು |
| 10 | ಸರ್ಕಾರದ ಕಾರ್ಯದರ್ಶಿಗಳು/ ವಿಶೇಷ ಕಾರ್ಯದರ್ಶಿಗಳು, ಆಹಾರ ಸಂಸ್ಕರಣೆ ಮತ್ತು ಕೊಯ್ಲಿನ್ನೋತ್ತರ ತಂತ್ರಜ್ಞಾನ. | ಸದಸ್ಯರು |
| 11 | ಆಯುಕ್ತರು, ಕೃಷಿ ಇಲಾಖೆ | ಸದಸ್ಯರು |
| 12 | ಆಯುಕ್ತರು, ರೇಷ್ಮೆ ಇಲಾಖೆ | ಸದಸ್ಯರು |
| 13 | ಆಯುಕ್ತರು, ಪಶು ಸಂಗೋಪಾನೆ ಇಲಾಖೆ | ಸದಸ್ಯರು |
| 14 | ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, (FRM) ಅರಣ್ಯ ಇಲಾಖೆ | ಸದಸ್ಯರು |
| 15 | ಆಯುಕ್ತರು / ನಿರ್ದೇಶಕರು, ತೋಟಗಾರಿಕೆ ಇಲಾಖೆ | ಸದಸ್ಯರು |
| 16 | ನಿರ್ದೇಶಕರು, ಕೃಷಿ ಮಾರುಕಟ್ಟೆ ಇಲಾಖೆ | ಸದಸ್ಯರು |
| 17 | ರಾಜ್ಯದ ಕೃಷಿ & ತೋಟಗಾರಿಕಾ ವಿಶ್ವವಿದ್ಯಾಲಯಗಳ ಸಂಶೋಧನಾ ನಿರ್ದೇಶಕರುಗಳು | ಸದಸ್ಯರು |
| 18 | ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿಯ ಸಮನ್ವಯಾಧಿಕಾರಿ (ಎಸ್.ಎಲ್.ಬಿ.ಸಿ. ಕನ್‌ವೀನರ್) | ಸದಸ್ಯರು |
| 19 | ನಿರ್ದೇಶಕರು, ರೈತ ಉತ್ಪಾದಕ ಸಂಸ್ಥೆಗಳ ಉತ್ಕೃಷ್ಟತಾ ಕೇಂದ್ರ | ಸದಸ್ಯರು |
| 20 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ (ಕೆಪೆಕ್) | ಸದಸ್ಯರು |
| 21 | ಕೃಷಿ ಉತ್ಪನ್ನಗಳ ಕೈಗಾರಿಕೆಗಳ ಪ್ರತಿನಿಧಿಗಳು | ಸದಸ್ಯರು |
| 22 | ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ | ಸದಸ್ಯ ಕಾರ್ಯದರ್ಶಿ |

Scanned by CamScanner

--

**ಅಧಿಕಾರಯುಕ್ತ ಸಮಿತಿಯ ಜವಾಬ್ದಾರಿಗಳು:**

1. ರೈತ ಉತ್ಪಾದಕರ ಸಂಸ್ಥೆಗಳ ಬಲವರ್ಧನೆಗೆ ಬೇಕಾಗುವಂತಹ ನೆರವು ಮತ್ತು ಸಂಪನ್ಮೂಲಗಳಾದ – ಪರಿಕರ, ತಾಂತ್ರಿಕ ಜ್ಞಾನ, ನೀತಿ, ಆರ್ಥಿಕ ನೆರವು ಮತ್ತು ಮೂಲಭೂತ ಸೌಕರ್ಯ ಇತ್ಯಾದಿ ಒದಗಿಸುವುದು.
2. ರಾಜ್ಯದಲ್ಲಿ ರೈತ ಉತ್ಪಾದಕರ ಸಂಸ್ಥೆಗಳ ರಚನೆಗೆ/ ಉನ್ನತೀಕರಣಕ್ಕೆ ಮಾರ್ಗದರ್ಶನ ಮತ್ತು ಮೇಲ್ವಿಚಾರಣೆ.
3. ರೈತ ಉತ್ಪಾದಕರ ಸಂಸ್ಥೆ ನೀತಿ ಅನ್ವಯ ತಯಾರಿಸಲಾಗುವ ಸಾಮಾನ್ಯ ಮಾರ್ಗಸೂಚಿಯನ್ನು ಅನುಮೋದಿಸುವುದು ಮತ್ತು ಆಗಿಂದಾಗ್ಗೆ ಪರಿಶೀಲಿಸುವುದು.
4. ರೈತ ಉತ್ಪಾದಕರ ಸಂಸ್ಥೆಗಳ ವಿವಿಧ ಹಂತಗಳಲ್ಲಿ ಮತ್ತು ವಿವಿಧ ಕ್ಷೇತ್ರಗಳಲ್ಲಿ ಬೇಡಿಕೆ ಅನ್ವಯ ಆರ್ಥಿಕ ನೆರವನ್ನು ನಿಗದಿಪಡಿಸುವುದು.
5. ಅಧಿಕಾರಯುಕ್ತ ಸಮಿತಿಯ ಸಭೆಯನ್ನು ತ್ರೈಮಾಸಿಕಕ್ಕೆ ಒಮ್ಮೆ ಅಥವಾ ಅಗತ್ಯವಿದ್ದಾಗ ಏರ್ಪಡಿಸುವುದು.
6. ರೈತ ಉತ್ಪಾದಕರ ಸಂಸ್ಥೆಗಳ ಅಭಿವೃದ್ಧಿ ಮತ್ತು ಕಾರ್ಯಕ್ರಮದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಇತರೆ ವಿಷಯಗಳು.

## II. ಜಿಲ್ಲಾ ಮಟ್ಟದ ರೈತ ಉತ್ಪಾದಕರ ಸಂಸ್ಥೆಗಳ ಸಮನ್ವಯ ಮತ್ತು ಮೇಲ್ವಿಚಾರಣೆ ಸಮಿತಿ (District Level Farmer Producer's Organization's Coordination & Monitoring Committee):

| ಕ್ರ.ಸಂ. | ಪದನಾಮ | ಹುದ್ದೆ |
|---|---|---|
| 1 | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು | ಉಪಾಧ್ಯಕ್ಷರು |
| 3 | ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ | ಸದಸ್ಯರು |
| 4 | ಉಪ ನಿರ್ದೇಶಕರು, ರೇಷ್ಮೆ ಇಲಾಖೆ | ಸದಸ್ಯರು |
| 5 | ಉಪ ನಿರ್ದೇಶಕರು, ಕೃಷಿ ಮಾರುಕಟ್ಟೆ ಇಲಾಖೆ | ಸದಸ್ಯರು |
| 6 | ಉಪ ನಿರ್ದೇಶಕರು, ಪಶು ಸಂಗೋಪನೆ ಇಲಾಖೆ | ಸದಸ್ಯರು |
| 7 | ಉಪ ಸಂರಕ್ಷಣಾಧಿಕಾರಿ, (ವಲಯ ಮತ್ತು ಸಾಮಾಜಿಕ) ಅರಣ್ಯ ಇಲಾಖೆ | ಸದಸ್ಯರು |
| 8 | ಉಪ ನಿಬಂಧಕರು, ಸಹಕಾರ ಇಲಾಖೆ | ಸದಸ್ಯರು |
| 9 | ಹಿರಿಯ ಸಹಾಯಕ ನಿರ್ದೇಶಕರು/ಉಪ ನಿರ್ದೇಶಕರು, ಮೀನುಗಾರಿಕೆ ಇಲಾಖೆ | ಸದಸ್ಯರು |
| 10 | ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರು | ಸದಸ್ಯರು |
| 11 | ಡಿ.ಡಿ.ಎಂ/ಎಲ್. ಡಿ.ಎಂ. ನಬಾರ್ಡ್ ಸಂಸ್ಥೆ | ಸದಸ್ಯರು |
| 12 | ಲೀಡ್ ಬ್ಯಾಂಕ್ ವ್ಯವಸ್ಥಾಪಕರು | ಸದಸ್ಯರು |
| 13 | ಜಂಟಿ ಕೃಷಿ ನಿರ್ದೇಶಕರು | ಸದಸ್ಯ ಕಾರ್ಯದರ್ಶಿ & ನೋಡಲ್ ಅಧಿಕಾರಿ |

Scanned by CamScanner

ಜಿಲ್ಲಾಮಟ್ಟದ ಸಮಿತಿಯ ಜವಾಬ್ದಾರಿಗಳು:

1. ಜಿಲ್ಲಾ ಮಟ್ಟದಲ್ಲಿ ರೈತ ಉತ್ಪಾದಕರ ಸಂಸ್ಥೆಗಳಿಗೆ ಸಂಬಂಧಿಸಿದಂತೆ ವಿವಿಧ ಅನುಷ್ಠಾನ ಸಂಸ್ಥೆಗಳ ಚಟುವಟಿಕೆಗಳ ಸಮನ್ವಯದ ಜವಾಬ್ದಾರಿ.
2. ವಿವಿಧ ರೈತ ಉತ್ಪಾದಕರ ಸಂಸ್ಥೆ ಕಾರ್ಯಕ್ರಮಗಳ ಅನುಷ್ಠಾನದ ಮೇಲ್ವಿಚಾರಣೆ ಮಾಡುವುದು.
3. ವಿವಿಧ ಇಲಾಖೆಗಳ ಯೋಜನೆಗಳನ್ನು ಒಗ್ಗೂಡಿಸುವಿಕೆ, ಫಾರ್ವರ್ಡ್ ಮತ್ತು ಬ್ಯಾಕ್ವರ್ಡ್ ಲಿಂಕೇಜ್‌ಗಳನ್ನು (ಹಿಮ್ಮುಖ ಹಾಗೂ ಮುಮ್ಮುಖ ಸರಪಳಿ) ಅಭಿವೃದ್ಧಿಪಡಿಸುವುದು.
4. ರೈತ ಉತ್ಪಾದಕರ ಸಂಸ್ಥೆಗಳಿಗೆ ಆರ್ಥಿಕ ಸೌಲಭ್ಯ ಪಡೆಯಲು ಮಾರ್ಗದರ್ಶನ ನೀಡುವುದು.
5. ರೈತ ಉತ್ಪಾದಕರ ಸಂಸ್ಥೆಗಳ ಕಾರ್ಯಕ್ರಮದ ಉಸ್ತುವಾರಿ ಹಾಗೂ ಮೌಲ್ಯಮಾಪನ ಮಾಡುವುದು.
6. ಸಮಿತಿಯು ಪ್ರತಿ ತ್ರೈಮಾಸಿಕಕ್ಕೆ ಅಥವಾ ಅಗತ್ಯವಿದ್ದಾಗ ಸಭೆಯನ್ನು ನಡೆಸುವುದು.

ಮೇಲ್ಕಂಡ ಎರಡೂ ಸಮಿತಿಗಳ ತೀರ್ಮಾನವನ್ನು ರೈತ ಉತ್ಪಾದಕರ ಸಂಸ್ಥೆಗಳ ರಚನೆಗೆ ತೊಡಗಿರುವ ಎಲ್ಲಾ ಅಭಿವೃದ್ಧಿ ಇಲಾಖೆ ಮತ್ತು ಅಭಿವೃದ್ಧಿ ಸಂಸ್ಥೆಗಳು ಅನುಷ್ಠಾನಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

26/02/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೇ ಇಲಾಖೆ, ಬೆಂಗಳೂರು.
8. ಮುಖ್ಯ ಪ್ರಧಾನ ವ್ಯವಸ್ಥಾಪಕರು, ನಬಾರ್ಡ್, ಬೆಂಗಳೂರು.
9. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
10. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
11. ಆಯುಕ್ತರು, ತೋಟಗಾರಿಕೆ ಇಲಾಖೆ, ಬೆಂಗಳೂರು.

Scanned by CamScanner

12. ಆಯುಕ್ತರು, ರೇಷ್ಮೆ ಇಲಾಖೆ ಬೆಂಗಳೂರು.
13. ಆಯುಕ್ತರು, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು
14. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಧಾರವಾಡ ಮತ್ತು ರಾಯಚೂರು.
15. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ
16. ಕುಲಪತಿಗಳು, ತೋಟಗಾರಿಕೆ ವಿಶ್ವವಿದ್ಯಾಲಯ, ಬಾಗಲಕೋಟೆ.
17. ಕುಲಪತಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ವಿಶ್ವವಿದ್ಯಾಲಯ, ಬೀದರ್.
18. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
19. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
20. ನಿರ್ದೇಶಕರು, ರೈತ ಉತ್ಪಾದಕರ ಸಂಸ್ಥೆಗಳ ಉತ್ಕೃಷ್ಟತಾ ಕೇಂದ್ರ, ಯು.ಎಚ್.ಎಸ್.-ಬಿ ಆವರಣ, ಜಿ.ಕೆ.ವಿ.ಕೆ, ಬೆಂಗಳೂರು.
21. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
22. ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿಯ ಸಮನ್ವಯಾಧಿಕಾರಿ (ಎಸ್.ಎಲ್.ಬಿ.ಸಿ. ಕನ್‌ವೀನರ್), ಬೆಂಗಳೂರು.
23. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
24. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ- 4&5), ಆರ್ಥಿಕ ಇಲಾಖೆ, ಬೆಂಗಳೂರು
25. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
26. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

Scanned by CamScanner